- ರಾಜ್ಯ ಮಟ್ಟದಲ್ಲಿ ಸಹಕಾರ ಇಲಾಖೆಯ ವಿಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಚಿಸಿರುವ ಸಮಿತಿಯಲ್ಲಿ ಪ್ರತಿ ಬುಧವಾರ ಯೋಜನೆಯ ಅನುಷ್ಠಾನ ಹಾಗೂ ಪ್ರಗತಿ ಬಗ್ಗೆ ವಿಮರ್ಶಿಸಲಾಗುತ್ತದೆ.
- ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಸಮಿತಿಯು ಪ್ರತಿ ಸೋಮವಾರ ಸಭೆ ಸೇರಿ ಯೋಜನೆಯ ಅನುಷ್ಠಾನದ ಬಗ್ಗೆ ವಿಮರ್ಶನೆ ನಡೆಸುತ್ತದೆ.
- ಈ ಯೋಜನೆಯಡಿಯಲ್ಲಿ ರಾಜ್ಯದಲ್ಲಿ 71 ಆಸ್ಪತ್ರೆಗಳನ್ನು ಗುರುತಿಸಲಾಗಿದೆ. ಈ ಯೋಜನೆ 1600 ವಿವಿಧ ರೀತಿಯ ಶಸ್ತ್ರಚಿಕಿತ್ಸೆಗಳನ್ನು ಒಳಗೊಂಡಿದೆ.
- ನೋಂದಾಯಿಸಲ್ಪಟ್ಟ ಎಲ್ಲಾ ರೈತ ಸದಸ್ಯರಿಗೆ ಗುರುತಿನ ಚೀಟಿಯನ್ನು ವಿತರಿಸಲಾಗಿದೆ.
- ನೋಂದಾಯಿಸಲ್ಪಟ್ಟ ಎಲ್ಲಾ ರೈತ ಸದಸ್ಯರ ಮಾಹಿತಿಯನ್ನು ಜಿಲ್ಲಾ ಮಟ್ಟದಲ್ಲಿ ಗಣಕೀಕರಣ ಮಾಡಲಾಗುತ್ತಿದೆ.
- 384 ಶಸ್ತ್ರಚಿಕಿತ್ಸೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ 373 ಸದಸ್ಯರಿಗೆ ಹೊರರೋಗಿಯಾಗಿ (OPD) ಚಿಕಿತ್ಸೆ ನೀಡಲಾಗಿದೆ.
- ಈ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ.

ಭದ್ರಾ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ದೊಡ್ಡಬಾತಿ ಇದನ್ನು ಖಾಸಗೀಯವರಿಗೆ ಮಾರಾಟ ಮಾಡುವ ಬಗ್ಗೆ

2375 (2956) : ಶ್ರೀ ಎಸ್.ಎ. ರವೀಂದ್ರನಾಥ್ (ಮಾಯಕೊಂಡ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ದಿನಾಂಕ: 31.3.2003ಕ್ಕೆ ಇದ್ದಂತೆ ಭದ್ರಾ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ದೊಡ್ಡಬಾತಿ ಇದರ ಕ್ರೋಢೀಕೃತ ನಷ್ಟವೆಷ್ಟು;

ಆ) ಸದರಿ ಕಾರ್ಖಾನೆಯನ್ನು ಖಾಸಗಿಯವರಿಗೆ ಮಾರಾಟ ಮಾಡುವ ಪ್ರಸ್ತಾಪ ಸರ್ಕಾರಕ್ಕೆ ಇದೆಯೇ;

ಇ) ಈ ಕಾರ್ಖಾನೆಯನ್ನು ಪುನಃಶ್ಚೇತನಗೊಳಿಸಲು ಸರ್ಕಾರ ಯೋಚಿಸುತ್ತಿದೆಯೇ?

ಶ್ರೀ ಹೆಚ್. ವಿಶ್ವನಾಥ್ (ಸಹಕಾರ ಸಚಿವರು)

ಅ) ಕಾರ್ಖಾನೆಯು ದಿನಾಂಕ: 31.3.2002ಕ್ಕೆ ರೂ. 416.19 ಲಕ್ಷ ಕ್ರೋಢೀಕೃತ ನಷ್ಟವನ್ನು ಹೊಂದಿರುತ್ತದೆ.

ಆ) ಈ ದಿನಾಂಕದವರೆಗೆ ಅಂತಹ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಇ) ಇಲ್ಲ

ಭದ್ರಾ ಸಹಕಾರಿ ಸಕ್ಕರೆ ಕಾರ್ಖಾನೆ (ನಿ) ದೊಡ್ಡ ಬಾತಿಯಲ್ಲಿ ಅಕ್ರಮವಾಗಿ ನೀಡುತ್ತಿದ್ದ ತುಟ್ಟಿಭತ್ಯೆ ಸೌಲಭ್ಯವನ್ನು ಸಕ್ರಮಗೊಳಿಸಿರುವ ಬಗ್ಗೆ

2376 (2957) : ಶ್ರೀ ಎಸ್.ಎ. ರವೀಂದ್ರನಾಥ್ (ಮಾಯಕೊಂಡ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?